ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE 3/11/20

# ಸಂಪುಟ ಮರುಮುದ್ರಣ

## ಸಂವಿಧಾನ ರಚನಾ ಸಮಿತಿಯ ನಡಾವಳಿಗಳು

**ಬೆಂಗಳೂರು:** 'ಸಂವಿಧಾನ ಶಿಲ್ಪಿ' ಡಾ.ಬಿ.ಆರ್. ಅಂಬೇಡ್ಕರ್ ಬರಹ ಮತ್ತು ಭಾಷಣಗಳನ್ನು ಒಳಗೊಂಡ ಸಂವಿಧಾನ ರಚನಾ ಸಮಿತಿ ನಡಾವಳಿಗಳ 22 ಸಂಪುಟಗಳನ್ನು ಮರುಮುದ್ರಣ ಮಾಡಲು ಅಧಿಕಾರಿಗಳಿಗೆ ಕನ್ನಡ ಮತ್ತು ಸಂಸ್ಕೃತಿ ಸಚಿವ ಸಿ.ಟಿ. ರವಿ ಸೂಚಿಸಿದ್ದಾರೆ.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಅಕಾಡೆಮಿ ಮತ್ತು ಪ್ರಾಧಿಕಾರ ಹಾಗೂ ಇಲಾಖೆ ಅಧಿಕಾರಿಗಳ ಜತೆ ಇಲಾಖೆಯ 3ನೇ ಪರಿಶೀಲನಾ ಸಭೆ ನಡೆಸಿ ಮಾತನಾಡಿದರು.



» **ಅಧಿಕಾರಿಗಳಿಗೆ ಸಚಿವ ಸಿ.ಟಿ. ರವಿ ಸೂಚನೆ**

ಕುವೆಂಪು ಭಾಷಾ ಭಾರತಿ ಪ್ರಾಧಿಕಾರ ವತಿಯಿಂದ 22 ಸಂಪುಟಗಳನ್ನು ಮರುಮುದ್ರಣ ಮಾಡುವಂತೆ ಅಧಿಕಾರಿಗಳಿಗೆ ನಿರ್ದೇಶಿಸಿದರು. ಕರ್ನಾಟಕ ಚಿತ್ರಕಲಾ ಪರಿಷತ್ ನೀಡುತ್ತಿರುವ ಸಾಂಪ್ರದಾಯಿಕ ಗುರುಕುಲ ತರಬೇತಿಗೆ ಶೈಕ್ಷಣಿಕ ಮಾನ್ಯತೆ ನೀಡಬೇಕೆಂಬ ಬೇಡಿಕೆಗೆ ಸ್ಪಂದಿಸಿದ ಸಚಿವರು, ಶೀಘ್ರದಲ್ಲೇ ಉನ್ನತ ಶಿಕ್ಷಣ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಅಶ್ವತ್ಥನಾರಾಯಣ, ಕರ್ನಾಟಕ ಲಲಿತ ಅಕಾಡೆಮಿ, ಉನ್ನತ ಶಿಕ್ಷಣ ಇಲಾಖೆ ಅಧಿಕಾರಿಗಳ ಸಭೆ ಕರೆಯುವ ಭರವಸೆ ನೀಡಿದರು. ವಿದ್ಯಾರ್ಥಿಗಳಿಗೆ ಕೊಡುಗು ಭಾಷೆಯಲ್ಲಿ ಶಿಕ್ಷಣ ನೀಡುತ್ತಿದ್ದು, ಇದನ್ನು 3ನೇ ಭಾಷೆಯಾಗಿ ಪರಿಗಣಿಸಬೇಕೆಂದು ಕೊಡುಗು ಅಕಾಡೆಮಿ ಅಧ್ಯಕ್ಷರ ಮನವಿಗೆ ಸ್ಥಳೀಯ ಭಾಷೆಯಲ್ಲಿ ಶಿಕ್ಷಣ ನೀಡಲು ಸರ್ಕಾರದ ನಿರ್ಬಂಧ ವಿಲ್ಲ ಎಂದು ಸ್ಪಷ್ಟಪಡಿಸಿದರು.

**ಚುರುಕುಗೊಳ್ಳಬೇಕು:** ನನ್ನ ನಿರೀಕ್ಷೆಗೆ ತಕ್ಕಂತೆ ಅಕಾಡೆಮಿಗಳು ಕೆಲಸ ಮಾಡುತ್ತಿಲ್ಲ. ಬೆರಳೆಣಿಕೆಯಷ್ಟು ಅಕಾಡೆಮಿಗಳು ಮಾತ್ರ ಸಕ್ರಿಯವಾಗಿವೆ. ಉಳಿದ ಅಕಾಡೆಮಿ ಮತ್ತು ಪ್ರಾಧಿಕಾರಗಳು ಇನ್ನಷ್ಟು ಚುರುಕಾಗಿ ಕಾರ್ಯ ನಿರ್ವಹಿಸಬೇಕು ಎಂದು ಸಲಹೆ ನೀಡಿದರು.

ಕರ್ನಾಟಕ ಸಾಹಿತ್ಯ ಅಕಾಡೆಮಿ ಸೇರಿದಂತೆ ಎಲ್ಲ ಅಕಾಡೆಮಿ, ಪ್ರಾಧಿಕಾರದ ಅಧ್ಯಕ್ಷರು, ಇಲಾಖೆ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

### ಅಧಿಕಾರಿಗಳಿಗೆ ಎಚ್ಚರಿಕೆ

ಕೆಲವು ಅಕಾಡೆಮಿ ಮತ್ತು ಪ್ರಾಧಿಕಾರದಲ್ಲಿ ಅನುದಾನ ಖರ್ಚಾಗದೆ ಉಳಿಸಿಕೊಳ್ಳಲಾಗಿದೆ. ಯಾವ ಕಾರಣಕ್ಕಾಗಿ ಕಾರ್ಯಕ್ರಮಗಳನ್ನು ರೂಪಿಸಿಲ್ಲ ಎಂದು ಅಧಿಕಾರಿಗಳನ್ನು ಸಚಿವರು ಪ್ರಶ್ನಿಸಿದರು. ಮುಂದಿನ ಸಭೆಯಲ್ಲಿ ಕಾರಣಗಳನ್ನು ನೀಡದೆ ಶೇ.100 ಪ್ರಗತಿಯನ್ನು ನೀಡಬೇಕು. ಇಲ್ಲದಿದ್ದರೆ ಅದಕ್ಕೆ ಅಧಿಕಾರಿಗಳೇ ಹೊಣೆಗಾರು ಎಂದು ಎಚ್ಚರಿಕೆ ನೀಡಿದರು.

### ಭಾವುಕರಾದ ಸಚಿವ ರವಿ

ಸದ್ಯದಲ್ಲೇ ಇಲಾಖೆಯಿಂದ ವಿಮುಖನಾಗುತ್ತಿದ್ದೇನೆ. ನಾನು ಸಚಿವ ಸ್ಥಾನದಿಂದ ನಿರ್ಗಮಿಸಿದರೂ ನನ್ನ ಮೇಲೆ ಜವಾಬ್ದಾರಿ ಹೆಚ್ಚಿದೆ. ಸಹಜವಾಗಿ ಅಧಿಕಾರ ಸಿಕ್ಕಾಗ ಪ್ರತಿಯೊಬ್ಬರಿಗೂ ಆಸೆ ಇದ್ದೇ ಇರುತ್ತದೆ. ಯಾರೊಬ್ಬರೂ ಜವಾಬ್ದಾರಿಯನ್ನು ಹೊರಲು ಮುಂದೆ ಬರುವುದಿಲ್ಲ. ಸಚಿವನಾಗಿದ್ದರೂ ಈಗ ಪಕ್ಷದ ಪ್ರಧಾನ ಕಾರ್ಯದರ್ಶಿಯಾಗಿ ಕಾರ್ಯ ನಿರ್ವಹಿಸಬೇಕು. ನಾನು ಜವಾಬ್ದಾರಿಯಿಂದ ವಿಮುಖನಾಗುವುದಿಲ್ಲ. ಪಕ್ಷದ ಸಲಹೆಯನ್ನು ಪಾಲಿಸುವುದು ನನ್ನ ಕರ್ತವ್ಯ ಎಂದು ಸಿ.ಟಿ. ರವಿ ಭಾವುಕರಾದರು ಎಂದು ತಿಳಿದುಬಂದಿದೆ.